<u>ಕರ್ನಾಟಕ ವಿಧಾನ ಪರಿಷತ್ತು</u>

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	ಃ	509
ಸದಸ್ಯರ ಹೆಸರು	ಃ	ಶ್ರೀ.ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ	ಃ	11.12.2020
ಉತ್ತರಿಸುವ ಸಚಿವರು	ಃ	ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು

<table>
<tr><th>ಕ್ರ. ಸಂ</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಅ)</td><td>ರಾಜ್ಯದಲ್ಲಿ ಎಷ್ಟು ಪಶು ಆಸ್ಪತ್ರೆಗಳಿವೆ;</td><td>ರಾಜ್ಯದಲ್ಲಿ ಒಟ್ಟು 4212 ಪಶುವೈದ್ಯಕೀಯ ಸಂಸ್ಥೆಗಳಿದ್ದು, ಸಂಸ್ಥೆಗಳ ವಿವರಗಳನ್ನು ಈ ಕೆಳಕಂಡಂತೆ ನೀಡಲಾಗಿದೆ.
<table>
<tr><th>ಪಾಲಿ ಕ್ಲಿನಿಕ್</th><th>ಪಶು ಆಸ್ಪತ್ರೆ</th><th>ಪಶು ಚಿಕಿತ್ಸಾಲಯ</th><th>ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರ</th><th>ಸಂಚಾರಿ ಪಶು ಚಿಕಿತ್ಸಾಲಯ</th><th>ಒಟ್ಟು</th></tr>
<tr><td>30</td><td>665</td><td>2135</td><td>1206</td><td>176</td><td>4212</td></tr>
</table></td></tr>
<tr><td>ಆ)</td><td>ಇದರಲ್ಲಿ ಸ್ವಂತ ಕಟ್ಟಡಗಳಿಲ್ಲದ ಆಸ್ಪತ್ರೆಗಳಸಂಖ್ಯೆ ಎಷ್ಟು;</td><td>ಒಟ್ಟು 200 ಪಶುವೈದ್ಯ ಸಂಸ್ಥೆಗಳಿಗೆ ಸ್ವಂತ ಕಟ್ಟಡಗಳು ಇರುವುದಿಲ್ಲ.</td></tr>
<tr><td>ಇ)</td><td>ಈ ಆಸ್ಪತ್ರೆಗಳಿಗೆ ಸ್ವಂತ ಕಟ್ಟಡವನ್ನು ಒದಗಿಸುವುದು ಯಾವಾಗ;</td><td>ನಿವೇಶನ ಹಾಗೂ ಅನುದಾನ ಲಭ್ಯತೆ ಮೇರೆಗೆ ಆರ್.ಐ.ಡಿ.ಎಫ್, ಯೋಜನೆಯಡಿ ಸ್ವಂತ ಕಟ್ಟಡ ನಿರ್ಮಾಣಕ್ಕೆ ಹಂತ ಹಂತವಾಗಿ ಕ್ರಮಕೈಗೊಳ್ಳಲಾಗುತ್ತಿದೆ.</td></tr>
<tr><td>ಈ)</td><td>ಒಟ್ಟು ಮಂಜೂರಾದ ಪಶು ವೈದ್ಯರ ಹುದ್ದೆಗಳೆಷ್ಟು; ಆ ಪೈಕಿ ಖಾಲಿ ಇರುವ ಹುದ್ದೆಗಳೆಷ್ಟು; ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಯಾವಾಗ? (ವಿವರ ನೀಡುವುದು)</td><td>ಪಶುಸಂಗೋಪನಾ ಇಲಾಖೆಯಲ್ಲಿ ಪಶುವೈದ್ಯಾಧಿಕಾರಿಗಳ ಒಟ್ಟು 1602 ಹುದ್ದೆಗಳು ಮಂಜೂರಾಗಿದ್ದು, ಪ್ರಸ್ತುತ 794 ಪಶುವೈದ್ಯಾಧಿಕಾರಿಗಳು ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುತ್ತಾರೆ. 808 ಪಶುವೈದ್ಯಾಧಿಕಾರಿಗಳ ಹುದ್ದೆ ಖಾಲಿ ಇರುತ್ತವೆ.

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಲ್ಲಿ ದಿನಾಂಕ: 05.09.2019 ರಲ್ಲಿದ್ದಂತೆ, ಖಾಲಿ ಇರುವ 639 ಪಶುವೈದ್ಯಾಧಿಕಾರಿ ಹುದ್ದೆಗಳನ್ನು ವಿಶೇಷ ನೇಮಕಾತಿ ನಿಯಮಗಳ ಮುಖಾಂತರ ಭರ್ತಿ ಮಾಡುವ ಪ್ರಸ್ತಾವನೆಗೆ ಪ್ರಸ್ತುತ ಆರ್ಥಿಕ ನಿರ್ಬಂಧಗಳ ಹಿನ್ನಲೆಯಲ್ಲಿ ಆರ್ಥಿಕ ಇಲಾಖೆಯು ಸಹಮತಿ ನೀಡಿರುವುದಿಲ್ಲ. ಆರ್ಥಿಕ ಇಲಾಖೆಯು ಸಹಮತಿ ನೀಡಿದ ನಂತರ ಖಾಲಿ ಇರುವ ಪಶುವೈದ್ಯಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ಅಗತ್ಯ ಕ್ರಮವಹಿಸಲಾಗುವುದು.</td></tr>
</table>

		ಮುಂದುವರೆದು, 371 (ಜೆ) ರಡಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ 61 ಪಶುವೈಧ್ಯಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮಗಳನ್ನು ರಚಿಸಿ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಆದರೆ ಆರ್ಥಿಕ ಇಲಾಖೆಯು ದಿನಾಂಕ: 06.07.2020 ರ ಸುತ್ತೋಲೆಯಲ್ಲಿ ಆರ್ಥಿಕ ನಿರ್ಬಂಧಗಳ ಹಿನ್ನಲೆಯಲ್ಲಿ 2020-21 ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ-ಕರ್ನಾಟಕ ಭಾಗದ ಹುದ್ದೆಗಳು ಹಾಗೂ ಬ್ಯಾಕ್ ಲಾಗ್ ಹುದ್ದೆಗಳು ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯುವಂತೆ ತಿಳಿಸಿರುತ್ತದೆ. ಆದುದರಿಂದ ಸದರಿ ನೇಮಕಾತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಮುಂದಿನ ಆದೇಶದವರೆಗೂ ತಡೆ ಹಿಡಿಯಲಾಗಿರುತ್ತದೆ.

ಸಂ: ಪಸಂಮೀ ಇ-195 ಪಸಸೇ 2020

(ಪ್ರಭು. ಬಿ.ಚವ್ಹಾಣ್)
ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು